ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 20/12/19

# 30ಕ್ಕೆ ಪಾಲಿಕೆ ಸ್ಥಾಯಿ ಸಮಿತಿ ಚುನಾವಣೆ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬಿಬಿಎಂಪಿ 12 ಸ್ಥಾಯಿ ಸಮಿತಿ ಚುನಾವಣೆಯನ್ನು ಡಿ.30 ರಂದು ನಡೆಸುವುದಾಗಿ ಬೆಂಗಳೂರು ವಿಭಾಗ ಪ್ರಾದೇಶಿಕ ಆಯುಕ್ತ ಹರ್ಷ ಗುಪ್ತ ಆದೇಶ ಹೊರಡಿಸಿದ್ದಾರೆ.



**12 ಸ್ಥಾಯಿ ಸಮಿತಿಗಳಿಗೆ 132 ಸದಸ್ಯರ ಆಯ್ಕೆ**

ಚುನಾವಣೆಯಲ್ಲಿ ಸ್ಪರ್ಧಿಸುವ ಸದಸ್ಯರು ಅಂದು ಬೆಳಗ್ಗೆ 8 ಗಂಟೆಯಿಂದ 9.30 ರವರೆಗೆ ಬಿಬಿಎಂಪಿ ಪೌರಸಭಾಂಗಣದಲ್ಲಿ ಪ್ರಾದೇಶಿಕ ಆಯುಕ್ತರಿಗೆ ನಾಮಪತ್ರ ಸಲ್ಲಿಸಬಹುದು. ನಂತರ ಸದಸ್ಯರ ಹಾಜರಾತಿ, ನಾಮಪತ್ರ ಪರಿಶೀಲನೆ, ನಾಮಪತ್ರ ಹಿಂಪಡೆಯಲು ಅವಕಾಶ ನೀಡಲಾಗುತ್ತದೆ. ನಂತರ 11.30 ಅಗತ್ಯವಿದ್ದಲ್ಲಿ ಚುನಾವಣೆ ನಡೆಸಿ ಫಲಿತಾಂಶ ಪ್ರಕಟ ಮಾಡಲಾಗುತ್ತದೆ.

**ಮುಂದೂಡಿಕೆಯಾಗಿದ್ದ ಚುನಾವಣೆ:** ಮೇಯರ್ ಹಾಗೂ ಉಪಮೇಯರ್ ಚುನಾವಣೆ ನಡೆದ ಅ.1 ರಂದು ಸ್ಥಾಯಿ ಸಮಿತಿಗಳ ಸದಸ್ಯರ ಆಯ್ಕೆ ನಡೆಯಬೇಕಿತ್ತು. ಆದರೆ, ಹಿಂದಿನ ಸ್ಥಾಯಿ ಸಮಿತಿ ಸದಸ್ಯರ ಅಧಿಕಾರಾವಧಿ ಮುಕ್ತಾಯಗೊಳ್ಳದ ಕಾರಣ ಮುಂದೂಡಲಾಗಿತ್ತು. ನಂತರ ಡಿ.4 ರಂದು ಚುನಾವಣೆ ಘೋಷಣೆ ಮಾಡಿದ್ದರೂ, ವಿಧಾನಸಭೆ ಉಪ ಚುನಾವಣೆ ಪ್ರಚಾರದ ಹಿನ್ನೆಲೆ ಯಾವೊಬ್ಬ ಸದಸ್ಯ ನಾಮಪತ್ರ ಸಲ್ಲಿಕೆ ಮಾಡಿರಲಿಲ್ಲ. ಆದ್ದರಿಂದ ಮತ್ತೊಮ್ಮೆ ಮುಂದೂಡಲಾಗಿತ್ತು.

**ಕೇವಲ 8 ತಿಂಗಳ ಅಧಿಕಾರ:** ಬಿಬಿಎಂಪಿ ಪಾಲಿಕೆ ಸದಸ್ಯರ ಐದು ವರ್ಷಗಳ ಆಯ್ಕೆ ಅವಧಿ ಬರುವ ಸೆ.28 ಕ್ಕೆ ಮುಕ್ತಾಯವಾಗಲಿದೆ. ಅಂದೇ ಸ್ಥಾಯಿ ಸಮಿತಿ ಅಧಿಕಾರವೂ ಅಂತ್ಯಗೊಳ್ಳಲಿದೆ. ಕಳೆದ ಸ್ಥಾಯಿ ಸಮಿತಿ ಸದಸ್ಯರು ಒಂದು ವರ್ಷ ಅಧಿಕಾರ ಬೇಕು ಎಂದು ನ್ಯಾಯಾಲಯದ ಮೊರೆ ಹೋಗಿ ಚುನಾವಣೆ ಮುಂದೂಡಿದ್ದರು. ಇದೀಗ ಹೊಸದಾಗಿ ಆಯ್ಕೆಯಾಗುವ ಸ್ಥಾಯಿ ಸಮಿತಿಯ ಅಧಿಕಾರಾವಧಿ ಕೇವಲ 8 ತಿಂಗಳಷ್ಟೇ ಇರುತ್ತದೆ.

## ಅಧ್ಯಕ್ಷ ಸ್ಥಾನಕ್ಕೆ ಸಚಿವರ ಆಪ್ತರಿಂದ ಲಾಬಿ

ಸಂಸದರ ಚುನಾವಣೆ, ಮೇಯರ್ ಮತ್ತು ಉಪಮೇಯರ್ ಆಯ್ಕೆ, ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ತಂದು ಅನರ್ಹ ಶಾಸಕರನ್ನು ಆಯ್ಕೆ ಮಾಡುವಲ್ಲಿ ನಡೆದ ವಿಧಾನಸಭೆ ಉಪಚುನಾವಣೆಯಲ್ಲಿ ಶ್ರಮಿಸಿದವರಿಗೆ ಅಧ್ಯಕ್ಷ ಸ್ಥಾನ ಸಿಗುವ ಸಾಧ್ಯತೆಯಿದೆ. ಸಚಿವರ ಆಪ್ತ ಬಳಗದ ಸದಸ್ಯರು ಕೂಡ ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಹೆಚ್ಚು ಪೈಪೋಟಿ ನಡೆಸಲಿದ್ದಾರೆ. ಜತೆಗೆ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸದೆ ನಿವೃತ್ತಿ ಹೊಂದುವ ಸದಸ್ಯರಿಗೂ ಒಮ್ಮೆ ಅಧ್ಯಕ್ಷ ಸ್ಥಾನ ನೀಡುವ ಅವಕಾಶ ಸಿಗಬಹುದು.